# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 451 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.02.2023. |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಗ್ರೇಡ್-01, ಕಾರ್ಯದರ್ಶಿ ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಸಹಾಯಕ ಮತ್ತು ಇತರೆ ಖಾಲಿ ಇರುವ ಹುದ್ದೆಗಳು ಎಷ್ಟು; (ಮಾಹಿತಿ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 582 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-01 ವೃಂದದಲ್ಲಿ 531 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದಲ್ಲಿ 627 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಲ್ಲಿ 278 ಹುದ್ದೆಗಳು ಖಾಲಿ ಇರುತ್ತವೆ.<br><br>ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ನ್ನು ರೂಪಿಸಲಾಗಿರುತ್ತದೆ. ಸದರಿ ನಿಯಮಗಳಲ್ಲಿ ಸಿಬ್ಬಂದಿ ವರ್ಗದ ಮಾದರಿ ನಿರ್ದಿಷ್ಟಪಡಿಸಿದ್ದು, ಪ್ರತಿ ಗ್ರಾಮ ಪಂಚಾಯತಿಗೆ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸಿ ಆದೇಶ ಹೊರಡಿಸುವುದಾಗಿ ತಿಳಿಸಿದೆ. ಅದರಂತೆ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸಲು ಕ್ರಮ ವಹಿಸಲಾಗುತ್ತಿದೆ. |
| (ಆ) | ಖಾಲಿ ಇರುವ ಹುದ್ದೆಗಳ ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಹೌದು. |
| (ಇ) | ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿ ಕೊರತೆಯಿಂದ ಕೆಲಸ ಕಾರ್ಯಗಳು ಮಂದಗತಿಯಲ್ಲಿ ಸಾಗುತ್ತಿರುವುದರಿಂದ ಸೇವಾ ಸೌಲಭ್ಯಗಳು ಸಾರ್ವಜನಿಕರಿಗೆ ಸಕಾಲಕ್ಕೆ ತಲುಪದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು? | ಬಂದಿದೆ.<br><br>ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ. |

೫೦

| | | |
|---|---|---|
| | | ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು ಖಾಲಿ ಹುದ್ದೆಗೆ ಎದುರಾಗಿ ಮುಂಬಡ್ತಿ/ ಸೇವೆಯೊಳಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ 96 ಗ್ರಾಪಂಅ 2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿಗಳು